


## ರೋಗಗಳಿಗೆ ಆಹ್ವಾನ

ಇ–ಕಸದಿಂದ ಉಂಟಾಗುವ ರೋಗಗಳು ನೂರಾರು. ಮುಖ್ಯವಾಗಿ ಕ್ಯಾನ್ಸರ್, ಶಾಶ್ವತ ಅಂಗವೈಕಲ್ಯ, ಮಕ್ಕಳಲ್ಲಿ ಚರ್ಮರೋಗ, ಉಸಿರಾಟದ ಸಮಸ್ಯೆ, ಕಿಡ್ನಿ, ಹೃದಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇ–ತ್ಯಾಜ್ಯವು ನೀರು ಮತ್ತು ಮಣ್ಣಿಗೆ ಸೇರುವುದರಿಂದ ಸಾಂಕ್ರಾಮಿಕ ರೋಗಗಳೂ ಹರಡುತ್ತವೆ.

ಎದುರಿಸುತ್ತಿರುವ ಅಪಾಯಗಳನ್ನು ಈ ನಗರಗಳೂ ಎದುರಿಸುವ ದಿನಗಳು ದೂರವಿಲ್ಲ.

ಇ–ತ್ಯಾಜ್ಯ ನಿರ್ವಹಣೆ ಲೋಪದಿಂದಾಗಿ ಭಾರತದಾದ್ಯಂತ ತೀವ್ರ ಆರೋಗ್ಯ ಸಮಸ್ಯೆ ಹಾಗೂ ಪರಿಸರ ಹಾನಿ ಉಂಟಾಗುತ್ತಿದೆ ಎಂದು ವಿಶ್ವಸಂಸ್ಥೆಯ ‘ಜಾಗತಿಕ ಇ–ತ್ಯಾಜ್ಯ ನಿಗಾ–2017’ ವರದಿ ಸ್ಪಷ್ಟವಾಗಿ ಹೇಳಿದೆ. ಬಳಸಿ ಎಸೆದ ಫೋನ್, ಲ್ಯಾಪ್‌ಟಾಪ್, ಫ್ರಿಡ್ಜ್, ಟಿ.ವಿ ಮೊದಲಾದ ಎಲೆಕ್ಟ್ರಾನಿಕ್ ಉಪಕರಣಗಳನ್ನು ಸೂಕ್ತವಾಗಿ ನಿರ್ವಹಣೆ ಮಾಡದಿದ್ದಲ್ಲಿ ಅಪಾಯ ಖಚಿತ ಎಂದು ಈ ವರದಿ ಎಚ್ಚರಿಸಿದೆ.

ವರದಿ ಪ್ರಸ್ತಾಪಿಸಿದ ಕೆಲವು ಪ್ರಮುಖ ಅಂಶಗಳು:

★ ಜಗತ್ತಿನಲ್ಲಿ ವೇಗವಾಗಿ ಬೆಳೆಯುತ್ತಿರುವ ಉದ್ಯಮಗಳ ಪೈಕಿ ಭಾರತದ ಎಲೆಕ್ಟ್ರಾನಿಕ್ ಉದ್ಯಮವೂ ಒಂದು.

★ ಆದರೆ, ಪ್ರಮುಖ ನಗರಗಳಲ್ಲಿ ತ್ಯಾಜ್ಯ ಮರುಬಳಕೆ ಘಟಕಗಳು ಇನ್ನೂ ಅಭಿವೃದ್ಧಿ ಹಂತದಲ್ಲಿವೆ.

★ ಇ–ತ್ಯಾಜ್ಯ ಉತ್ಪಾದನೆ ಪ್ರಮಾಣದಲ್ಲಿ ಕ್ರಮೇಣ ಹೆಚ್ಚಳವಾಗಿದ್ದರೆ, ಮರುಬಳಕೆರ ಪ್ರಮಾಣ ಅತ್ಯಲ್ಪ.

ಈ ಹಿನ್ನೆಲೆಯಲ್ಲಿ ಸರ್ಕಾರಗಳು ಮಾತ್ರವಲ್ಲ ಖಾಸಗಿ ಉದ್ಯಮಗಳೂ ನಿಖರ ಕಾರ್ಯಯೋಜನೆಗಳನ್ನು ರೂಪಿಸಬೇಕಿದೆ. ಬೆಂಗಳೂರು ದಕ್ಷಿಣ ಭಾಗದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡಿರುವಂತಹ ಕ್ರಮಗಳನ್ನು ಎಲ್ಲ ನಗರಗಳಿಗೂ ವಿಸ್ತರಿಸಬೇಕಾದ ಅಗತ್ಯವಿದೆ. ಜತೆಗೆ ಇ–ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದಂತೆ, ಸೂಕ್ತ ಮರುಬಳಕೆಗೆ ಅವಕಾಶ ಒದಗುವಂತೆ ವಿಲೇವಾರಿ ಮಾಡುವ ಬಗ್ಗೆ ಸಾರ್ವಜನಿಕರಲ್ಲಿ ಎಚ್ಚರ ಮೂಡಿಸಬೇಕಾದ ಅಗತ್ಯವೂ ಇದೆ. ಸರ್ಕಾರವನ್ನೇ ಕಾಯದೆ ಸ್ವಯಂಸೇವಾ ಸಂಸ್ಥೆಗಳು ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸಿದರೆ ಪರಿಣಾಮದ ದೃಷ್ಟಿಯಿಂದಲೂ ಸಮಸ್ಯೆಯನ್ನು ಎದುರಿಸುವುದು ಸುಲಭ.

ಸಮಸ್ಯೆ ನಿಮ್ಮದು ಪರಿಹಾರ ನಮ್ಮದು
ದಕ್ಷಿಣ ಭಾರತದ ಜನರಲ್ಲಿ ಪ್ರಶಂಸೆಗಳಿಸಿರುವ ವಶೀಕರಣ ಮಾಂತ್ರಿಕರು
ಶ್ರೀಯುತ ಪರಶುರಾಮ್ ಗುರೂಜಿ

ಶ್ರೀ ಸಾಯಿಬಾಬ ಉಪಾಸಕರು
ಸ್ತ್ರೀ ಪುರುಷ ವಶೀಕರಣ, ಸತಿಪತಿ ಕಲಹ, ಡೈವೋರ್ಸ್ ಪ್ರಾಬ್ಲಮ್, ಸಾಲಬಾಧೆ, ಪ್ರೇಮವಿಚಾರ, ಸಂತಾನಫಲ, ಇನ್ನಿತರ ನಿಮ್ಮ ಸಮಸ್ಯೆ ಏನೇ ಇರಲಿ ಎಷ್ಟೇ ಕಠಿಣವಾಗಿರಲಿ ಈಗಿನ ಕಾಲದಲ್ಲೂ ಜೀವಂತವಾಗಿರುವಂತಹ ಕೇರಳದ ಕೆಲವು ಪ್ರಾಚೀನ ವಿಸ್ಮಯ ವಿದ್ಯೆಗಳಿಂದ
ಕೇವಲ 5 ದಿನದಲ್ಲಿ
100% ಪರಿಹಾರ ಶತಸಿದ್ಧ
ಇಲ್ಲಿ ಹೇಳುವ ವಿಷಯವನ್ನು ಗುಪ್ತವಾಗಿಡಲಾಗುವುದು ಹಾಗೂ ಗುರೂಜಿಯವರಲ್ಲಿ ನಿಸ್ಸಂಕೋಚದಿಂದ ಮಾತನಾಡಲು ಕರೆಮಾಡಿ:
ಜೈಬಾಲಾಜಿ ಜ್ಯೋತಿಷ್ಯಂ ಬನಶಂಕರಿ ಮುಖ್ಯಬಸ್‌ನಿಲ್ದಾಣದ ಪಕ್ಕದಲ್ಲಿ. ಬೆಂಗಳೂರು. 9620444460